**All India Radio: Bangalore**
**National Bulletin In Kannada**
**25.07.2026  19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

**೧. ವಿವಿಧ ಕ್ಷೇತ್ರಗಳಲ್ಲಿ ಭಾರತ-ರೊಮೇನಿಯಾ ಸಂಬಂಧ ಮತ್ತಷ್ಟು ಬಲಿಷ್ಠ- ರಾಷ್ಟ್ರಪತಿ ದ್ರೌಪದಿ ಮುರ್ಮು**

**೨. ಸಚಿವ ಸ್ಥಾನಕ್ಕೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ**

**೩. ಯುನೆಸ್ಕೋ ವಿಶ್ವ ಪಾರಂಪರಿಕ ಪಟ್ಟಿಯಲ್ಲಿ ಸ್ಥಾನ ಪಡೆದ ಸಾರನಾಥ್**

**೪. ಮನ್ ಕಿ ಬಾತ್; ೧೩೬ನೇ ಆವೃತ್ತಿಯಲ್ಲಿ ನಾಳೆ ಭಾರತೀಯರನ್ನುದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಮನದ ಮಾತು**

**೫. ಟಿ-೨೦ ಕ್ರಿಕೆಟ್; ಜಿಂಬಾಬ್ವೆ ತಂಡಕ್ಕೆ ೨೨೦ ರನ್‌ಗಳ ಗುರಿ ನೀಡಿದ ಭಾರತ**

**<>><><*><><<>**

ವಿದೇಶಗಳಲ್ಲಿ ವಾಸಿಸುವ ಭಾರತೀಯರು ತಮ್ಮ ಮಾತೃಭೂಮಿಯೊಂದಿಗೆ ಆಳವಾದ ಸಂಪರ್ಕ ಹೊಂದಿದ್ದಾರೆ ಹಾಗೂ ಅವರ ಸಾಧನೆಗಳು ಮತ್ತು ಸಮರ್ಪಣೆಯ ಮೂಲಕ ಪ್ರತಿಯೊಬ್ಬ ಭಾರತೀಯರನ್ನು ಹೆಮ್ಮೆಪಡುವಂತೆ ಮಾಡುತ್ತಿದ್ದಾರೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ರೊಮೇನಿಯಾದ ಬುಕಾರೆಸ್ಟ್‌ನಲ್ಲಿ ಭಾರತೀಯ ಸಮುದಾಯ ಉದ್ದೇಶಿಸಿ ಮಾತನಾಡಿದ ಅವರು, ರೊಮೇನಿಯಾ ಅಧ್ಯಕ್ಷ ನಿಕುಸೋರ್ ಡಾನ್ ಮತ್ತು ಇತರ ನಾಯಕರೊಂದಿಗಿನ ತಮ್ಮ ಸಂವಹನವು ದ್ವಿಪಕ್ಷೀಯ ಸಂಬಂಧಗಳನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುವ ಬಲವಾದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದರು. ಭಾರತ ಮತ್ತು ರೊಮೇನಿಯಾ ನಡುವಿನ ಸಹಕಾರವು ವ್ಯಾಪಾರ, ರಕ್ಷಣೆ, ನವೀಕರಿಸಬಹುದಾದ ಇಂಧನ, ಡಿಜಿಟಲ್ ತಂತ್ರಜ್ಞಾನ, ಶಿಕ್ಷಣ, ಸಂಶೋಧನೆ, ಆರೋಗ್ಯ ರಕ್ಷಣೆ, ವಿಜ್ಞಾನ ಮತ್ತು ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ನಾವೀನ್ಯತೆ ಸೇರಿದಂತೆ ವ್ಯಾಪಕ ಶ್ರೇಣಿಯ ಕ್ಷೇತ್ರಗಳಲ್ಲಿ ವಿಸ್ತರಿಸಿದೆ ಎಂದು ಅವರು ತಿಳಿಸಿದರು. ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದವನ್ನು ಉಲ್ಲೇಖಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇದರ ಆರಂಭಿಕ ಅನುಷ್ಠಾನವು ರೊಮೇನಿಯಾ ಮತ್ತು ಇತರ ಐರೋಪ್ಯ ಒಕ್ಕೂಟದ ಸದಸ್ಯ ರಾಷ್ಟ್ರಗಳೊಂದಿಗೆ ವ್ಯಾಪಾರ ಮತ್ತು ಹೂಡಿಕೆಗೆ ಹೊಸ ಮಾರ್ಗಗಳನ್ನು ತೆರೆಯುತ್ತದೆ ಎಂದು ಹೇಳಿದರು.

**<>><><*><><<>**

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಇಂದು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರಿಗೆ ತಮ್ಮ ರಾಜೀನಾಮೆ ಪತ್ರವನ್ನು ಸಲ್ಲಿಸಿದ್ದಾರೆ. ಕಳೆದ ಹತ್ತು ದಿನಗಳಿಂದ ವಿದ್ಯಾರ್ಥಿಗಳ ಪ್ರತಿಭಟನೆಯ ನಂತರದ ಪರಿಸ್ಥಿತಿಯಿಂದ ತಮಗೆ ನೋವಾಗಿದೆ. ಇದು ತಮಗೆ ಪ್ರತಿಷ್ಠೆಯ ವಿಷಯವಲ್ಲ ಎಂದು ಸಾಮಾಜಿಕ ಜಾಲತಾಣದಲ್ಲಿ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ. ನವದೆಹಲಿಯ ಜಂತರ್ ಮಂತರ್‌ನಲ್ಲಿನ ಪರಿಸ್ಥಿತಿಯನ್ನು ಪರಿಗಣಿಸಿ, ರಾಷ್ಟ್ರವಿರೋಧಿ ಶಕ್ತಿಗಳು ಅದನ್ನು ಬಳಸಿಕೊಳ್ಳದಂತೆ ತಡೆಯುವ ಜೊತೆಗೆ, ಒಬ್ಬ ವಿದ್ಯಾರ್ಥಿಯ ಭವಿಷ್ಯವು ಕಾನೂನು ಸಂಕೀರ್ಣತೆಗಳಲ್ಲಿ ಸಿಲುಕಿಕೊಳ್ಳದಂತೆ ನೋಡಿಕೊಳ್ಳುವ ಉದ್ದೇಶದಿಂದ, ಪ್ರಧಾನಿಯವರಿಗೆ ರಾಜೀನಾಮೆ ಸಲ್ಲಿಸಿರುವುದಾಗಿ ತಿಳಿಸಿದ್ದಾರೆ. ಪ್ರಧಾನಿಯವರ ಮಾರ್ಗದರ್ಶನ, ನಂಬಿಕೆ ಮತ್ತು ನಿರಂತರ ಬೆಂಬಲಕ್ಕಾಗಿ ಕೃತಜ್ಞತೆ ಸಲ್ಲಿಸಿರುವ ಧರ್ಮೇಂದ್ರ ಪ್ರಧಾನ್, ರಾಷ್ಟ್ರ ಸೇವೆಯು ತಮ್ಮ ಜೀವನದ ಅತ್ಯುನ್ನತ ಆದ್ಯತೆಯಾಗಿದೆ ಮತ್ತು ಅದಕ್ಕೆ ಸದಾ ಸಮರ್ಪಿತ ಎಂದು ಹೇಳಿದ್ದಾರೆ.

**<>><><*><><<>**

ಧರ್ಮೇಂದ್ರ ಪ್ರಧಾನ್ ಅವರ ದಶಕದ ಪ್ರಯಾಣವು ಸಾರ್ವಜನಿಕ ಜೀವನ ಮತ್ತು ವಿದ್ಯಾರ್ಥಿಗಳ ಕಲ್ಯಾಣಕ್ಕೆ ಹಾಗೂ ಜೀವಮಾನದ ಬದ್ಧತೆಗೆ ಸಾಕ್ಷಿಯಾಗಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ಅವರ ಸಮರ್ಪಿತ ಸೇವೆ, ಸುಧಾರಣೆಗಳಿಗೆ ಬದ್ಧತೆ ಮತ್ತು ಬಲವಾದ ಭಾರತವನ್ನು ನಿರ್ಮಿಸಲು ನೀಡಿದ ಕೊಡುಗೆಗಾಗಿ ಧರ್ಮೇಂದ್ರ ಪ್ರಧಾನ್ ಅವರಿಗೆ ಧನ್ಯವಾದ ಅರ್ಪಿಸಿದ್ದಾರೆ. ಭಾರತದ ಶಿಕ್ಷಣ ಪರಿಸರ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಮತ್ತು ಲಕ್ಷಾಂತರ ವಿದ್ಯಾರ್ಥಿಗಳ ಕ್ಷೇಮಕ್ಕಾಗಿ ಧರ್ಮೇಂದ್ರ ಪ್ರಧಾನ್ ಅವರ ಪ್ರಾಮಾಣಿಕ ಪ್ರಯತ್ನಗಳನ್ನು ಸಚಿವ ಕಿರಣ್ ರಿಜಿಜು ಶ್ಲಾಘಿಸಿದ್ದಾರೆ.

**<><><*><><<>**

ಸರ್ಕಾರ ತನ್ನ ಬೇಡಿಕೆಗಳಿಗೆ ಒಪ್ಪಿಕೊಂಡ ಬಳಿಕ ಸಿಜೆಪಿ ತನ್ನ ಪ್ರತಿಭಟನೆಯನ್ನು ಹಿಂತೆಗೆದುಕೊಂಡಿದೆ. ಕೇಂದ್ರ ಸಚಿವರಾದ ಜೆ.ಪಿ.ನಡ್ಡಾ ಮತ್ತು ಡಾ.ಜಿತೇಂದ್ರ ಸಿಂಗ್ ಇಂದು ಸಿಜೆಪಿ ನಿಯೋಗದೊಂದಿಗೆ ಪರೀಕ್ಷಾ ವ್ಯವಸ್ಥೆಯಲ್ಲಿ ಸುಧಾರಣೆಗಳು ಮತ್ತು ಪ್ರಶ್ನೆಪತ್ರಿಕೆ ಸೋರಿಕೆಯನ್ನು ತಡೆಗಟ್ಟುವ ಕ್ರಮಗಳ ಬೇಡಿಕೆಗಳ ಮೇಲೆ ಕೇಂದ್ರೀಕರಿಸುವ ಮೂರನೇ ಸುತ್ತಿನ ಚರ್ಚೆ ನಡೆಸಿದರು. ನಂತರ ನವದೆಹಲಿಯಲ್ಲಿ ಸಿಜೆಪಿ ನಿಯೋಗದೊಂದಿಗೆ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಚಿವ ಜೆ.ಪಿ.ನಡ್ಡಾ, ಸಭೆಯಲ್ಲಿ, ಪ್ರತಿಭಟನಾಕಾರರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಬಾರದು ಮತ್ತು ಅವರ ವಿರುದ್ಧ ಯಾವುದೇ ಎಫ್ಐಆರ್ ಗಳನ್ನು ದಾಖಲಿಸಬಾರದು ಎಂಬ ಸಿಜೆಪಿಯ ಬೇಡಿಕೆಗಳನ್ನು ಸರ್ಕಾರ ಮಾನ್ಯ ಮಾಡಿದೆ ಎಂದು ಹೇಳಿದರು. ಯಾವುದೇ ಎಫ್ಐಆರ್ ದಾಖಲಾಗಿದ್ದರೆ, ಅದನ್ನು ಹಿಂಪಡೆಯಲಾಗುತ್ತದೆ ಮತ್ತು ಎಫ್ಐಆರ್‌ಗಳ ಪ್ರತಿಗಳನ್ನು ಸಹ ಒದಗಿಸಲಾಗುತ್ತದೆ ಎಂದು ಸರ್ಕಾರ ಒಪ್ಪಿಕೊಂಡಿದೆ. ಆತ್ಮಹತ್ಯೆ ಮಾಡಿಕೊಂಡವರಿಗೆ ಪರಿಹಾರದ ವಿಷಯದ ಬಗ್ಗೆ, ಸರ್ಕಾರ ಸಂಪೂರ್ಣ ಸಹಾನುಭೂತಿಯನ್ನು ಹೊಂದಿದೆ. ನಿಯಮಗಳಿಗೆ ಅನುಸಾರವಾಗಿ ಗರಿಷ್ಠ ಪರಿಹಾರವನ್ನು ಒದಗಿಸುವುದನ್ನು ಸರ್ಕಾರ ಖಚಿತಪಡಿಸುತ್ತದೆ ಎಂದು ಅವರು ತಿಳಿಸಿದರು. ಸಿಜೆಪಿಯ ಮುಖ್ಯ ವಕ್ತಾರ ಸೌರವ್ ದಾಸ್ ಮಾತನಾಡಿ, ಪ್ರತಿಭಟನೆಯನ್ನು ಹಿಂತೆಗೆದುಕೊಳ್ಳುವುದಾಗಿ ಘೋಷಿಸಿದರು.

**<><><*><><<>**

ಪ್ರಾಚೀನ ಬೌದ್ಧ ತಾಣ ಸಾರನಾಥವನ್ನು ಯುನೆಸ್ಕೋ ವಿಶ್ವ ಪಾರಂಪರಿಕ ಪಟ್ಟಿಯಲ್ಲಿ ಸೇರಿಸಲಾಗಿದೆ. ಈ ಕುರಿತು ಪ್ರತಿಕ್ರಿಯಿಸಿರುವ ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್, ಇದನ್ನು ಭಾರತದ ಸಾಂಸ್ಕೃತಿಕ ಪರಂಪರೆಗೆ ನಿರ್ಣಾಯಕ ಕ್ಷಣ ಎಂದು ಶ್ಲಾಘಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಸಚಿವರು, ಸಾರನಾಥವು ಶಾಂತಿ, ಬುದ್ಧಿವಂತಿಕೆ ಮತ್ತು ಸಹಾನುಭೂತಿಯ ಕಾಲಾತೀತ ದೀಪಸ್ತಂಭವಾಗಿದೆ. ಇದು ಮಾನವೀಯತೆಗೆ ಭಾರತೀಯ ನಾಗರಿಕತೆಯ ಆಳವಾದ ಆಧ್ಯಾತ್ಮಿಕ ಮತ್ತು ತಾತ್ವಿಕ ಕೊಡುಗೆಗಳನ್ನು ಪ್ರತಿಬಿಂಬಿಸುತ್ತದೆ. ಪೀಳಿಗೆಯಿಂದ ಪೀಳಿಗೆಗೆ ಸ್ಫೂರ್ತಿ ನೀಡುವ ವಿಚಾರಗಳ ತೊಟ್ಟಿಲಾಗಿ ರಾಷ್ಟ್ರದ ಶಾಶ್ವತ ಪಾತ್ರವನ್ನು ಈ ಶಾಸನವು ಪುನರುಚ್ಚರಿಸುತ್ತದೆ ಎಂದು ಹೇಳಿದ್ದಾರೆ.

**<><><*><><<>**

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಇದು ಮನ್ ಕಿ ಬಾತ್‌ನ ೧೨೯ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಹಾಗೂ ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಈ ಕಾರ್ಯಕ್ರಮ ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

**<><><*><><<>**

ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು ನವದೆಹಲಿಯಲ್ಲಿ ಇಂದು ಸಿಂಗಾಪುರದ ಕಾನೂನು ಸಚಿವ ಎಡ್ವಿನ್ ಟಾಂಗ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಸಚಿವ ಅರ್ಜುನ್ ರಾಮ್ ಮೇಘವಾಲ್, ಸಭೆಯಲ್ಲಿ ಭಾರತ-ಸಿಂಗಾಪುರ ನಡುವಿನ ಕಾನೂನು ಸಹಕಾರವನ್ನು ಮತ್ತಷ್ಟು ಬಲಪಡಿಸುವುದು ಹಾಗೂ ಸಾಂಸ್ಥಿಕ ಮತ್ತು ನ್ಯಾಯಾಂಗ ಸಹಕಾರವನ್ನು ಇನ್ನಷ್ಟು ವಿಸ್ತರಿಸುವ ಕುರಿತು ಚರ್ಚೆ ನಡೆಸಲಾಗಿದೆ ಎಂದು ತಿಳಿಸಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತ, ಪರಿವರ್ತನಾತ್ಮಕ ಕಾನೂನು ಸುಧಾರಣೆಗಳನ್ನು ಮುಂದುವರಿಸುವುದರ ಜೊತೆಗೆ, ಜಾಗತಿಕ ಮಟ್ಟದಲ್ಲಿ ಕಾನೂನು ಸಹಭಾಗಿತ್ವವನ್ನು ವಿಸ್ತರಿಸುವ ಕಾರ್ಯಕ್ಕೂ ಆದ್ಯತೆ ನೀಡುತ್ತಿದೆ ಎಂದು ಅವರು ಹೇಳಿದ್ದಾರೆ.

<>><><*><><<>

ಭಾರತೀಯ ಕರಾವಳಿ ರಕ್ಷಣಾ ಪಡೆ-ಐಸಿಜಿ, ದಮನ್, ದಾದ್ರಾ ಮತ್ತು ನಗರ ಹವೇಲಿ ಹಾಗೂ ದಕ್ಷಿಣ ಗುಜರಾತ್‌ನ ಪ್ರವಾಹಪೀಡಿತ ಪ್ರದೇಶಗಳಲ್ಲಿ ಸಿಲುಕಿದ್ದ ೧೭೦ ಮಂದಿಯನ್ನು ಯಶಸ್ವಿಯಾಗಿ ರಕ್ಷಿಸಿದೆ. ಈ ತಿಂಗಳ ೨೨ರ ಮಧ್ಯರಾತ್ರಿಯಿಂದ ಇದುವರೆಗೆ ೧೧ ರಕ್ಷಣಾ ಕಾರ್ಯಾಚರಣೆಗಳನ್ನು ನಡೆಸಲಾಗಿದ್ದು, ನಿರಂತರ ಮಳೆ, ತೀವ್ರ ಪ್ರವಾಹ ಹಾಗೂ ಅತ್ಯಂತ ಪ್ರತಿಕೂಲ ಹವಾಮಾನ ಪರಿಸ್ಥಿತಿಯ ನಡುವೆಯೂ ಕಾರ್ಯಾಚರಣೆ ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ.

<>><><*><><<>

ಕಂದಾಯ ಗುಪ್ತಚರ ನಿರ್ದೇಶನಾಲಯ-ಡಿಆರ್‌ಐ, ಚಿನ್ನ ಕಳ್ಳಸಾಗಣೆ ಗುಂಪುಗಳ ಮೇಲೆ ತನ್ನ ದಾಳಿಯನ್ನು ತೀವ್ರಗೊಳಿಸಿದೆ. ಕಳ್ಳಸಾಗಣೆ ಮಾಡುತ್ತಿದ್ದ ಒಟ್ಟು ೨೭ ಕಿಲೋಗ್ರಾಂ ತೂಕದ ವಿದೇಶಿ ಮೂಲದ ಚಿನ್ನವನ್ನು ವಶಪಡಿಸಿಕೊಳ್ಳಲಾಗಿದೆ ಮತ್ತು ೧೨ ಜನರನ್ನು ಬಂಧಿಸಲಾಗಿದೆ ಎಂದು ಕೇಂದ್ರ ಹಣಕಾಸು ಸಚಿವಾಲಯ ತಿಳಿಸಿದೆ. ಮುಂಬೈನಲ್ಲಿ, ಡಿಆರ್‌ಐ ಅಧಿಕಾರಿಗಳು ಇಥಿಯೋಪಿಯಾದ ಅಡಿಸ್ ಅಬಾಬಾದಿಂದ ಆಗಮಿಸಿದ ಮೂವರು ಪ್ರಯಾಣಿಕರನ್ನು ಬಂಧಿಸಿದ್ದು, ಸುಮಾರು ೧೨ ಕಿಲೋಗ್ರಾಂಗಳಷ್ಟು ತೂಕದ ವಿದೇಶಿ ಮೂಲದ ಆರು ಚಿನ್ನದ ಇಟ್ಟಿಗೆಗಳನ್ನು ವಶಪಡಿಸಿಕೊಂಡಿದ್ದಾರೆ. ವಿಮಾನದ ಹಿಂಭಾಗದ ಶೌಚಾಲಯದ ಸೀಲಿಂಗ್ ಪ್ಯಾನೆಲ್‌ಗಳ ಒಳಗೆ ಚಿನ್ನವನ್ನು ಮರೆಮಾಡಲಾಗಿತ್ತು. ಮತ್ತೊಂದು ಕಾರ್ಯಾಚರಣೆಯಲ್ಲಿ, ಉತ್ತರ ಪ್ರದೇಶದ ಬ್ರಹ್ಮಪುತ್ರ ಮೇಲ್‌ನಲ್ಲಿ ಸುಮಾರು ಐದು ಕಿಲೋಗ್ರಾಂಗಳಷ್ಟು ತೂಕದ ವಿದೇಶಿ ಮೂಲದ ೪೨ ಚಿನ್ನದ ಬಿಸ್ಕೆಟ್‌ಗಳನ್ನು ಕಳ್ಳಸಾಗಣೆ ಮಾಡುತ್ತಿದ್ದಾಗ ಮಹಿಳಾ ಪ್ರಯಾಣಿಕರೊಬ್ಬರನ್ನು ಬಂಧಿಸಲಾಯಿತು. ಬಾಂಗ್ಲಾದೇಶದ ಮೂಲಕ ಭಾರತಕ್ಕೆ ಚಿನ್ನವನ್ನು ಕಳ್ಳಸಾಗಣೆ ಮಾಡಲಾಗಿದೆ ಎಂಬುದನ್ನುವಿಚಾರಣೆಯ ಸಮಯದಲ್ಲಿ ಮಹಿಳೆ ಒಪ್ಪಿಕೊಂಡಿದ್ದಾರೆ. ಮುಂಬೈ, ಕೋಲ್ಕತ್ತಾ, ಕೊಚ್ಚಿ ಮತ್ತು ಗುವಾಹಟಿಯಲ್ಲಿ ಇದೇ ರೀತಿಯ ಕಾರ್ಯಾಚರಣೆಗಳನ್ನು ನಡೆಸಲಾಗಿದ್ದು, ಎಂಟು ಜನರನ್ನು ಬಂಧಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

<>><><*><><<>

ಜಿಂಬಾಬ್ವೆಯ ಹರಾರೆ ಸ್ಪೋರ್ಟ್ಸ್ ಕ್ಲಬ್ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿಯ ಎರಡನೇ ಪಂದ್ಯದಲ್ಲಿ ಜಿಂಬಾಬ್ವೆ ವಿರುದ್ಧ ಮೊದಲು ಬ್ಯಾಟಿಂಗ್ ಮಾಡಿದ ಭಾರತ, ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೧೯ ರನ್ ಗಳಿಸಿದೆ. ಭಾರತದ ಪರ ಇಶಾನ್ ಕಿಶಾನ್ ೮೧ ರನ್ ಸಿಡಿಸಿದರೆ, ತಿಲಕ್ ವರ್ಮಾ ೭೦ ರನ್ ಪೇರಿಸಿದರು. ಗೆಲುವಿನ ಗುರಿ ಬೆನ್ನತ್ತಿರುವ ಜಿಂಬಾಬ್ವೆ, ಇತ್ತೀಚಿನ ವರದಿಯಂತೆ ೧೩ ಓವರ್‌ಗಳಿಗೆ ೭ ವಿಕೆಟ್ ನಷ್ಟಕ್ಕೆ ೯೯ ರನ್ ಮಾಡಿ ಆಡುತ್ತಿದೆ.

<>><><*><><<>

ಕಳೆದ ಒಂದು ತಿಂಗಳಿನಲ್ಲಿ ನೆರೆಯ ರಾಷ್ಟ್ರಗಳಾದ ಪಾಕಿಸ್ತಾನ ಮತ್ತು ಇರಾನ್‌ನಿಂದ ಒಟ್ಟು ೧೪ ಸಾವಿರದ ೫ ಐನೂರ ಮೂವತ್ತೊಂಬತ್ತು ಅಫ್ಘನ್ ನಿರಾಶ್ರಿತ ಕುಟುಂಬಗಳು ದೇಶಕ್ಕೆ ಮರಳಿವೆ ಎಂದು ಅಫ್ಘಾನಿಸ್ತಾನ ಸರ್ಕಾರ ತಿಳಿಸಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>